ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

**31.12.2024** **18.40 hrs**

<><*<><>*><>

<u>ಮುಖ್ಯಾಂಶಗಳು</u>

೧. ಹೊಸವರ್ಷದ ಸಂಭ್ರಮಾಚರಣೆಗೆ ಬೆಂಗಳೂರಿನಲ್ಲಿ ಕ್ಷಣಗಣನೆ ; ರಾತ್ರಿ ೯ ಗಂಟೆಯ ಬಳಿಕ ಎಲ್ಲ ಮೇಲ್ಸೇತುವೆಗಳು ಬಂದ್

೨. ಹೊಸವರ್ಷಾಚರಣೆ ಹಿನ್ನೆಲೆ ; ಚಾಮುಂಡಿ ಬೆಟ್ಟದಲ್ಲಿ ರಾತ್ರಿ ಭಕ್ತರ ಪ್ರವೇಶಕ್ಕೆ ನಿರ್ಬಂಧ - ಹಂಪಿಯಲ್ಲಿ ಬಿಗಿ ಭದ್ರತೆ

೩. ಮೈಸೂರಿನ ಖಾಸಗಿ ಸಂಸ್ಥೆಯ ಆವರಣದಲ್ಲಿ ಮುಂದುವರೆದ ಚಿರತೆ ಕಾರ್ಯಾಚರಣೆ

೪. ಸಾರ್ವಜನಿಕ ಆಸ್ಪತ್ರೆಯೊಳಗೆ ಜಾನುವಾರು, ಬೀದಿನಾಯಿ ಪ್ರವೇಶಿಸದಂತೆ ಸರ್ಕಾರ ಕಟ್ಟುನಿಟ್ಟಿನ ಆದೇಶ

೫. ಹುಟ್ಟೂರಿನಲ್ಲಿ ನಾಳೆ ಹುತಾತ್ಮ ಕೊಡಗಿನ ಯೋಧ ಧಿವಿನ್ ಅಂತ್ಯಕ್ರಿಯೆ

<><*<><>*><>

ಹೊಸ ವರ್ಷದ ಸಂಭ್ರಮಾಚರಣೆಗೆ ರಾಜಧಾನಿ ಬೆಂಗಳೂರಿನಲ್ಲಿ ಕ್ಷಣಗಣನೆ ಆರಂಭವಾಗಿದೆ. ಎಂ.ಜಿ. ರೋಡ್ ಸೇರಿದಂತೆ ಹಲವೆಡೆ ಬಿಗಿ ಬಂದೋಬಸ್ತ್ ಕೈಗೊಳ್ಳಲಾಗಿದೆ. ನಗರದಾದ್ಯಂತ ೭ ಸಾವಿರದ ೫೦೦ ಸಿಸಿ ಟಿವಿ ಕ್ಯಾಮೆರಗಳನ್ನು ಅಳವಡಿಸಲಾಗಿದೆ. ಈ ಬಾರಿ ಎಂ.ಜಿ. ರೋಡ್‌ನಲ್ಲಿ ೭ ರಿಂದ ೮ ಲಕ್ಷ ಮಂದಿ ಸೇರುವ ನಿರೀಕ್ಷೆಯಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಬಿಗಿ ಭದ್ರತೆ ಕೈಗೊಳ್ಳಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ನಗರದಲ್ಲಿ ಹೊಸವರ್ಷದ ಸಂಭ್ರಮಾಚರಣೆಗೆ ರಾತ್ರಿ ೨ ಗಂಟೆಯವರೆಗೆ ಗಡುವು ನೀಡಲಾಗಿದೆ ಎಂದು ಬೆಂಗಳೂರು ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾತ್ರಿ ೯ ಗಂಟೆಯ ಬಳಿಕ ನಗರದ ಎಲ್ಲಾ ಮೇಲ್ಸೇತುವೆಗಳು ಬಂದ್ ಆಗಲಿದೆ. ಹೆಚ್ಚು ಜನ ಸೇರುವಲ್ಲಿ ೮೦೦ ಕ್ಯಾಮೆರ ಅಳವಡಿಸಲಾಗಿದೆ. ಮಹಾತ್ಮ ಗಾಂಧಿ ರಸ್ತೆ, ಚರ್ಚ್ ಸ್ಟ್ರೀಟ್‌ಗಳಿಗೆ ವಾಹನಗಳ ಪ್ರವೇಶವನ್ನು ನಿಷೇಧಿಸಲಾಗಿದೆ. ಸಂಭ್ರಮಾಚರಣೆಯ ವೇಳೆ ದೊಡ್ಡ ಸ್ಕ್ರೀನ್ ಬಳಸುವ ಮೂಲಕ ಜನರ ಚಲನ-ವಲನಗಳ ಬಗ್ಗೆ ಪೊಲೀಸರು ನಿಗಾ ಇಡಲಿದ್ದಾರೆ. ಈ ಬಾರಿ

ಮಹಿಳೆಯರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸಿ ಓಡಾಡುವಂತಿಲ್ಲ ಎಂದು ಆಯುಕ್ತರು ಕಟ್ಟು ನಿಟ್ಟಿನ ಆದೇಶ ಹೊರಡಿಸಿದ್ದಾರೆ.

**ಧ್ವನಿ : ಬಿ. ದಯಾನಂದ್ ಪೊಲೀಸ್ ಆಯುಕ್ತ**

**<><*<><>*><>**

ಹೊಸ ವರ್ಷಾಚರಣೆ ಪ್ರಯುಕ್ತ ಇಂದು ರಾತ್ರಿ ೧೧ ಗಂಟೆಯಿಂದ ೨ ಗಂಟೆಯವರೆಗೆ ವಿವಿಧ ಮಾರ್ಗಗಳಲ್ಲಿ ಹೆಚ್ಚುವರಿ ಸಾರಿಗೆ ಸೌಲಭ್ಯ ಒದಗಿಸಲು ಬಿಎಂಟಿಸಿ ನಿರ್ಧರಿಸಿದೆ. ಹೊಸ ವರ್ಷದ ಸಂಭ್ರಮಾಚರಣೆಗೆ ಅನುಕೂಲವಾಗುವಂತೆ ನೇರಳೆ ಮತ್ತು ಹಸಿರು ಮಾರ್ಗಗಳಲ್ಲಿ ಮೆಟ್ರೋ ರೈಲು ಸೇವೆಗಳನ್ನು ವಿಸ್ತರಿಸಲಾಗಿದೆ. ಕೊನೆಯ ರೈಲು ನಾಳೆ ಮುಂಜಾನೆ ೨ ಗಂಟೆಗೆ ಎಲ್ಲಾ ಟರ್ಮಿನಲ್ ನಿಲ್ದಾಣಗಳಿಂದ ಹೊರಡಲಿದೆ. ನಾಡಪ್ರಭು ಕೆಂಪೇಗೌಡ ಮೆಟ್ರೋ ನಿಲ್ದಾಣದಿಂದ ಕೊನೆಯ ರೈಲು ಎಲ್ಲಾ ನಾಲ್ಕು ದಿಕ್ಕುಗಳಿಗೆ ಮುಂಜಾನೆ ೨.೪೦ಕ್ಕೆ ಹೊರಡಲಿದೆ. ಎಂ.ಜಿ. ರಸ್ತೆಯಲ್ಲಿ ಜನಸಂದಣಿ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಇಂದು ರಾತ್ರಿ ೧೧ ಗಂಟೆಯಿಂದ ಎಂ.ಜಿ. ರಸ್ತೆ ಮೆಟ್ರೋ ನಿಲ್ದಾಣದ ಪ್ರವೇಶ ಮತ್ತು ನಿರ್ಗಮನ ದ್ವಾರಗಳನ್ನು ಮುಚ್ಚಲಾಗುತ್ತದೆ. ಪ್ರಯಾಣಿಕರ ಅನುಕೂಲಕ್ಕಾಗಿ ಹತ್ತಿರದ ನಿಲ್ದಾಣಗಳಾದ ಟ್ರಿನಿಟಿ ಮತ್ತು ಕಬ್ಬನ್ ಪಾರ್ಕ್‌ನಲ್ಲಿ ರೈಲುಗಳು ನಿಲ್ಲಲಿವೆ.

**<><*<><>*><>**

ಸಾಂಸ್ಕೃತಿಕ ನಗರಿ ಮೈಸೂರು ಹೊಸ ವರ್ಷಾಚರಣೆ ಸ್ವಾಗತಕ್ಕೆ ಸಜ್ಜಾಗಿದ್ದು, ಚಾಮುಂಡಿಬೆಟ್ಟದಲ್ಲಿ ರಾತ್ರಿ ೯ ರಿಂದ ಪ್ರವಾಸಿಗರಿಗೆ ನಿರ್ಬಂಧ ಹೇರಲಾಗಿದೆ. ಚಾಮುಂಡಿಬೆಟ್ಟಕ್ಕೆ ಇಂದು ರಾತ್ರಿ ಸಂಚಾರ ಬಂದ್ ಮಾಡಲಾಗಿದ್ದು, ಪ್ರವಾಸಿಗರು, ಭಕ್ತರಿಗೆ ರಾತ್ರಿ ಪ್ರವೇಶವಿರುವುದಿಲ್ಲ ಎಂದು ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಆದೇಶ ಹೊರಡಿಸಿದ್ದಾರೆ. ರಾತ್ರಿ ೯ರ ಬಳಿಕ ಚಾಮುಂಡಿಬೆಟ್ಟದಲ್ಲಿರುವ ಪ್ರವಾಸಿಗರು ಹಾಗೂ ಸಾರ್ವಜನಿಕರು ಬೆಟ್ಟದಿಂದ ಕೆಳಗಿಳಿಯುವಂತೆ ಸೂಚಿಸಿದ್ದಾರೆ. ನಾಳೆ ದೇವಿ ದರ್ಶನಕ್ಕೆ ಅವಕಾಶ ಮಾಡಿಕೊಡಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಜಯನಗರ ಜಿಲ್ಲೆಯಲ್ಲಿ ಹೊಸ ವರ್ಷದ ಸಂಭ್ರಮಾಚರಣೆಯ ಪ್ರಯುಕ್ತ ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಸಾರ್ವಜನಿಕರು ಅಹಿತಕರ ಘಟನೆ ಜರುಗದಂತೆ ಹೊಸ ವರ್ಷವನ್ನು ಆಚರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಎಲ್ ಶ್ರೀಹರಿ ಬಾಬು ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಗೆ

ಮಾಹಿತಿ ನೀಡಿದ ಅವರು, ಹಂಪಿಯ ಸುತ್ತಮುತ್ತ ವಿಶೇಷ ಪೊಲೀಸ್ ಬಿಗಿ ಭದ್ರತೆ ಒದಗಿಸಲಾಗಿದೆ ಎಂದು ಹೇಳಿದ್ದಾರೆ.

ಧ್ವನಿ: ಬಿ.ಎಲ್. ಶ್ರೀಹರಿ ಬಾಬು

**<><*<><>*><>**

೨೦೨೪ನೇ ಸಾಲಿನ ವಾರ್ಷಿಕ ವಿದ್ಯಮಾನ ಒಳಗೊಂಡ ವಾರ್ತಾ ಸಂಚಿಕೆ ಕಾಲಚಕ್ರ ಇಂದು ರಾತ್ರಿ ೮.೪೫ ರಿಂದ ೯.೪೫ರವರೆಗೆ ಪ್ರಸಾರವಾಗಲಿದೆ. ಜನವರಿಯಿಂದ ಡಿಸೆಂಬರ್ ಅಂತ್ಯದವರೆಗೆ ಪ್ರಮುಖ ಘಟನಾವಳಿಗಳ ಸಂಕ್ಷಿಪ್ತ ಅವಲೋಕನವನ್ನು ಇದು ಒಳಗೊಂಡಿದೆ. ಬೆಂಗಳೂರು ಆಕಾಶವಾಣಿ ಸುದ್ದಿವಿಭಾಗ ಈ ಕಾರ್ಯಕ್ರಮವನ್ನು ಸಿದ್ಧಪಡಿಸಿದೆ.

ಕೇಳಿ ಕಾಲಚಕ್ರ

**<><*<><>*><>**

ಹೊಸ ವರ್ಷದ ಆಚರಣೆ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಕೋಲಾರ ಜಿಲ್ಲಾ ಪೊಲೀಸ್ ಇಲಾಖೆ ಭದ್ರತೆಗಾಗಿ ೫೦೦ಕ್ಕೂ ಹೆಚ್ಚು ಅಧಿಕಾರಿ ಮತ್ತು ಪೊಲೀಸ್ ಸಿಬ್ಬಂದಿ ಹಾಗೂ ೨೦೦ ಹೋಮ್ ಗಾರ್ಡ್ ಗಳನ್ನು ಕರ್ತವ್ಯಕ್ಕೆ ನಿಯೋಜಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಿಖಿಲ್ ಬಿ. ತಿಳಿಸಿದ್ದಾರೆ. ಹೊಸ ವರ್ಷಾಚರಣೆ ಸಂದರ್ಭದಲ್ಲಿ ಸಾರ್ವಜನಿಕರು ಹಾಗೂ ಪ್ರವಾಸಿಗರು ಯಾವುದೇ ರೀತಿಯ ಅನುಚಿತ ವರ್ತನೆ ತೋರದೆ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಹೊಸ ವರ್ಷಾಚರಣೆಗಾಗಿ ಕೊಡಗು ಜಿಲ್ಲೆಗೆ ನಿರೀಕ್ಷಿತ ಪ್ರವಾಸಿಗರು ಬಾರದ ಹಿನ್ನೆಲೆಯಲ್ಲಿ ಪ್ರವಾಸೋದ್ಯಮಿಗಳು ಬೇಸರ ವ್ಯಕ್ತಪಡಿಸಿದ್ದಾರೆ. ಈ ಕುರಿತಂತೆ ಒಂದು ವರದಿ

ಧ್ವನಿ : ಕೊಡಗು ಪಿಟಿಸಿ

**<><*<><>*><>**

ಮೈಸೂರು ನಗರದ ಖಾಸಗಿ ಸಂಸ್ಥೆ ಆವರಣದಲ್ಲಿ ಕಾಣಿಸಿಕೊಂಡಿರುವ ಚಿರತೆ ಸೆರೆಗೆ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅರಣ್ಯ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ತಂಡದಲ್ಲಿ ಪಶುವೈದ್ಯರು, ಚಿರತೆ ಸೆರೆ ತರಬೇತಿ ಪಡೆದ ೪೦ ಸಿಬ್ಬಂದಿ ಜೊತೆಗೆ ವನ್ಯಜೀವಿ ವಿಭಾಗದ ಅರಣ್ಯಾಧಿಕಾರಿಗಳೂ ಸ್ಥಳದಲ್ಲಿದ್ದು, ಕಾರ್ಯಾಚರಣೆಯ ಉಸ್ತುವಾರಿ ನೋಡಿಕೊಳ್ಳುತ್ತಿದ್ದಾರೆ. ಸಿಸಿ ಟಿವಿಯಲ್ಲಿ ಚಿರತೆ ಸಂಚಾರದ ದೃಶ್ಯಗಳು ಸೆರೆಯಾಗಿದ್ದು, ಮಧ್ಯಾಹ್ನ ೧೨ಗಂಟೆ ಸುಮಾರಿಗೆ ಚಿರತೆ ಇರುವಿಕೆ ಖಚಿತವಾದ ಹಿನ್ನೆಲೆಯಲ್ಲಿ ತುರ್ತು

ಕಾರ್ಯಾಚರಣೆಗೆ ಸೂಚನೆ ನೀಡಲಾಗಿದೆ. ಚಿರತೆ ಸಮೀಪದ ವಸತಿ ಪ್ರದೇಶಗಳಿಗೆ ನುಗ್ಗದಂತೆ ಕ್ರಮ ವಹಿಸಲಾಗಿದೆ. ಚಿರತೆ ಪತ್ತೆಗೆ ಥರ್ಮಲ್ ಕ್ಯಾಮರಾ ಅಳವಡಿಸಿದ ಡ್ರೋನ್ ಸಹ ಬಳಸಲಾಗುತ್ತಿದೆ ಎಂದು ಹೇಳಿದ್ದಾರೆ.

<><*<><>*><>

ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ಜಾನುವಾರು ಹಾಗೂ ಬೀದಿ ನಾಯಿಗಳು ಆವರಣದೊಳಗೆ ಪ್ರವೇಶಿಸಿ ಒಳ ಹಾಗೂ ಹೊರ ರೋಗಿಗಳಿಗೆ ಆತಂಕ ಉಂಟು ಮಾಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಈ ಹಿನ್ನೆಲೆಯಲ್ಲಿ ಆಸ್ಪತ್ರೆ ಆವರಣದೊಳಗೆ ಯಾವುದೇ ಜಾನುವಾರು ಹಾಗೂ ಸಾಕು ಪ್ರಾಣಿಗಳು ಪ್ರವೇಶಿಸದಂತೆ ಅಗತ್ಯ ಕ್ರಮಗಳನ್ನು ವಹಿಸಲು ಸೂಚಿಸಲಾಗಿದೆ. ಈ ಕುರಿತು ನಿರ್ಲಕ್ಷ್ಯ ವಹಿಸಿದರೆ ಕರ್ತವ್ಯ ಲೋಪ ಎಂದು ಪರಿಗಣಿಸಿ ಸಂಸ್ಥೆಯ ಮುಖ್ಯಸ್ಥರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ತಿಳಿಸಿದೆ. ಎಲ್ಲ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಯ ಮುಖ್ಯಸ್ಥರು ಈ ಸಂಬಂಧ ತೆಗೆದುಕೊಂಡಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಮೂಲಕ ಒಂದು ವಾರದೊಳಗೆ ವರದಿ ಸಲ್ಲಿಸುವಂತೆ ಸರ್ಕಾರ ಸೂಚಿಸಿದೆ.

<><*<><>*><>

ಕಳೆದ ವಾರ ಶ್ರೀನಗರದಲ್ಲಿ ಸಂಭವಿಸಿದ ಸೇನಾ ವಾಹನ ಅಪಘಾತದಲ್ಲಿ ಸಾವನ್ನಪ್ಪಿದ ಕೊಡಗಿನ ಯೋಧ ಧಿವಿನ್ ಅಂತ್ಯಕ್ರಿಯೆ ನಾಳೆ ಹುಟ್ಟೂರಾದ ಆಲೂರು ಸಿದ್ದಾಪುರದಲ್ಲಿ ಜರುಗಲಿದೆ. ಸೇನಾ ವಾಹನ ಪ್ರಪಾತಕ್ಕೆ ಬಿದ್ದು ನಾಲ್ವರು ಯೋಧರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದರು. ಅಪಘಾತದಲ್ಲಿ ಗಾಯಗೊಂಡು ಚಿಂತಾಜನಜಕ ಸ್ಥಿತಿಯಲ್ಲಿ ಶ್ರೀನಗರದ ಸೇನಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಧಿವಿನ್ ಐದು ದಿನಗಳ ಬಳಿಕ ಚಿಕಿತ್ಸೆ ಫಲಕಾರಿಯಾಗದೇ ಸಾವನ್ನಪಿದ್ದಾರೆ. ಶ್ರೀನಗರದಿಂದ ಇಂದು ಸಂಜೆ ಧಿವಿನ್ ಪಾರ್ಥೀವ ಶರೀರವನ್ನು ಸೇನಾ ವಿಮಾನದ ಮೂಲಕ ಬೆಂಗಳೂರಿಗೆ ತರಲಾಗಿದೆ. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಕೊಡಗು ಮೈಸೂರು ಸಂಸದ ಯದುವೀರ್ ಒಡೆಯರ್ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದರು.

<><*<><>*><>

ಕಾಫಿ ಉದ್ಯಮಕ್ಕೆ ಸಂಬಂಧಿಸಿದಂತೆ ಅಗತ್ಯ ನೆರವು ನೀಡಲು ಕೇಂದ್ರ ಬಂದರು ಸಚಿವಾಲಯ ಬದ್ಧವಾಗಿದೆ ಎಂದು ಕೇಂದ್ರ ಬಂದರು, ಹಡಗು, ಜಲಸಾರಿಗೆ ಸಚಿವಾಲಯದ ಜಂಟಿ ಕಾರ್ಯದರ್ಶಿ ಆರ್. ಲಕ್ಷ್ಮಣನ್ ಭರವಸೆ ನೀಡಿದ್ದಾರೆ. ಮಡಿಕೇರಿಯಲ್ಲಿ ಕಾಫಿ ಉದ್ಯಮ ತಜ್ಞರು, ಚೇಂಬರ್ ಆಫ್ ಕಾಮರ್ಸ್ ಪ್ರಮುಖರೊಂದಿಗೆ

ನವ ಮಂಗಳೂರು ಬಂದರು ಪ್ರಾಧಿಕಾರದ ವತಿಯಿಂದ ಆಯೋಜಿತ ಸಭೆಯಲ್ಲಿ ಮಾತನಾಡಿದ ಅವರು, ಕಾಫಿ ಉದ್ಯಮದ ಮೂಲ ಬೇಡಿಕೆಗಳನ್ನು ಈಡೇರಿಸುವ ನಿಟ್ಟಿನಲ್ಲಿ ಕೇಂದ್ರದ ಉನ್ನತಾಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಕಲ್ಪಿಸುವುದಾಗಿ ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**